# ಕರ್ನಾಟಕ ವಿಧಾನ ಪರಿಷತ್ತು

## ನೂರ ಮೂವತ್ತಮೂರನೆಯ ಅಧಿವೇಶನ

## ಕಾರ್ಯಕಲಾಪಗಳ ಪಟ್ಟಿ

**ಗುರುವಾರ, ದಿನಾಂಕ: 09ನೇ ಫೆಬ್ರವರಿ, 2017**
**(ಸಮಯ: ಬೆಳಗ್ಗೆ: 11.00 ಗಂಟೆಗೆ)**

******

### 01. ನೂತನ ಸದಸ್ಯರಿಂದ ಪ್ರಮಾಣ ವಚನ

### 02. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಮೂರನೆಯ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಮೂರನೆಯ ಪಟ್ಟಿ

### 03. ವರದಿಯನ್ನೊಪ್ಪಿಸುವುದು

**ಶ್ರೀ ಕೆ. ಅಬ್ದುಲ್ ಜಬ್ಬಾರ್ (ಸದಸ್ಯರು, ಕರ್ನಾಟಕ ವಿಧಾನ ಮಂಡಲದ ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಮಿತಿ)** ಅವರು 2016-17ನೇ ಸಾಲಿನ ಕರ್ನಾಟಕ ವಿಧಾನ ಮಂಡಲದ ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಮಿತಿಯ ಆರನೇ ವರದಿಯನ್ನು ಒಪ್ಪಿಸುವುದು.

### 04. ಗಮನ ಸೆಳೆಯುವ ಸೂಚನೆಗಳು

ಅ) **ಶ್ರೀ ಬಸವರಾಜ ಪಾಟೀಲ್ ಇಟಗಿ** ಅವರು ರಾಯಚೂರು ಜಿಲ್ಲೆಯ ದೇವದುರ್ಗ ತಾಲ್ಲೂಕಿನ ಎನ್.ಆರ್.ಬಿ.ಸಿ. ಡಿಸ್ಟ್ರಿಬ್ಯೂಟರಿಗಳಿಂದ ಅಸಮರ್ಪಕ ನೀರು ಸರಬರಾಜಿನ ತೊಂದರೆ ನಿವಾರಿಸಲು ಬ್ಯಾಲೆನ್ಸಿ ರಿಸರ್‌ವಾಯರ್ ನಿರ್ಮಿಸಲು ಹಾಗೂ ಕಾಲುವೆಗಳ ಆಧುನೀಕರಣದ ಬಗ್ಗೆ ಕ್ರಮ ಕೈಗೊಳ್ಳುವಂತೆ **ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರ ಗಮನ ಸೆಳೆಯುವುದು.**

..2

ಆ) **ಶ್ರೀ ಬಸವರಾಜ ಹೊರಟ್ಟಿ ಮತ್ತು ಶ್ರೀ ಚೌಡರೆಡ್ಡಿ ತೂಪಲ್ಲಿ** ಅವರು ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆಯಲ್ಲಿ ದಿನಾಂಕ: 04.05.2016ರಂದು ರೂ.412ಕೋಟಿ ಐಸಿಟಿ (ICT) ಹಂತ 3ನ್ನು ರದ್ದುಮಾಡಿರುವ ಕಾಮಗಾರಿ ಯೋಜನೆಯನ್ನು ಪ್ರಾರಂಭಿಸುವ ಬಗ್ಗೆ **ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಗೂ ವಕ್ಫ್ ಸಚಿವರ ಗಮನ ಸೆಳೆಯುವುದು**.

## ೦5. **ನಿಯಮ 330ರ ಮೇರೆಗೆ**

**ಅ) ಶ್ರೀ ರಾಮಚಂದ್ರಗೌಡ** ಅವರು ಬಿ.ಬಿ.ಎಂ.ಪಿ.ಗೆ ಸೇರಿದ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢಶಾಲೆಗಳಲ್ಲಿ ಮಕ್ಕಳಿಗೆ ಸಮವಸ್ತ್ರ ನೀಡದಿರುವ ಹಾಗೂ ಇತ್ಯಾದಿ ಮೂಲಭೂತ ಸೌಲಭ್ಯಗಳ ಕೊರತೆ ಮತ್ತು ಸದರಿ ಶಾಲೆಗಳ ಸಮಗ್ರ ಅಭಿವೃದ್ಧಿ ಬಗ್ಗೆ ಪ್ರಸ್ತಾಪಿಸುವುದು. **(ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು)**

**ಆ) ಕ್ಯಾಪ್ಟನ್ ಗಣೇಶ್ ಕಾರ್ಣಿಕ್** ಅವರು ರಾಜ್ಯದ ಸಮಾಜ ಕಲ್ಯಾಣ ಇಲಾಖೆಯ ಅಧೀನದಲ್ಲಿ ನಡೆಯುತ್ತಿರುವ ಬಹುತೇಕ ಬಾಲಕ-ಬಾಲಕಿಯರ ವಸತಿ ನಿಲಯಗಳಲ್ಲಿನ ಸಮಸ್ಯೆಗಳ ಬಗ್ಗೆ ಪ್ರಸ್ತಾಪಿಸುವುದು. **(ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು)**

## **೦6. ರಾಜ್ಯಪಾಲರ ಭಾಷಣಕ್ಕೆ ಸಂಬಂಧಿಸಿದ ವಂದನಾರ್ಪಣಾ ಪ್ರಸ್ತಾವ**

"2017ನೇ ಫೆಬ್ರವರಿ, ೦6ರಂದು ಘನತೆವೆತ್ತ ರಾಜ್ಯಪಾಲರು ವಿಧಾನ ಮಂಡಲದ ಸದಸ್ಯರುಗಳನ್ನುದ್ದೇಶಿಸಿ ದಯಪಾಲಿಸಿದ ಭಾಷಣಕ್ಕಾಗಿ ಈ ಅಧಿವೇಶನದಲ್ಲಿ ಸೇರಿರುವ ವಿಧಾನ ಪರಿಷತ್ತಿನ ಸದಸ್ಯರಾದ ನಾವು ರಾಜ್ಯಪಾಲರಿಗೆ ಕೃತಜ್ಞತಾಪೂರ್ವಕವಾದ ವಂದನೆಗಳನ್ನು ಸಮರ್ಪಿಸಲು ಅಪ್ಪಣೆ ಕೋರುತ್ತೇವೆ" ಎಂದು ದಿನಾಂಕ: 07.02.2017ರಂದು ಶ್ರೀ ಶರಣಪ್ಪ ಮಟ್ಟೂರ ರವರು ಸೂಚಿಸಿದ ಪ್ರಸ್ತಾವದ ಮೇಲಿನ ಮುಂದುವರೆದ ಚರ್ಚೆ:

(ಎರಡನೆಯ ದಿನ)

**ಶ್ರೀನಿವಾಸ**
**ಕಾರ್ಯದರ್ಶಿ**

---